# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 882 |
| ಸದಸ್ಯರ ಹೆಸರು | : | ಶ್ರೀ ಬಸನಗೌಡ ಬಾದರ್ಲಿ<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 24.08.2026. |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು. |

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕಲ್ಯಾಣ ಕರ್ನಾಟಕ ಭಾಗದಲ್ಲೇ ಶೈಕ್ಷಣಿಕವಾಗಿ ಮುಂದುವರೆಯುತ್ತಿರುವ ಸಿಂಧನೂರು ತಾಲ್ಲೂಕಿನಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಗೆ ಸ್ವಂತ ಕಟ್ಟಡವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಬಂದಿದೆ</td></tr>
<tr><td>ಆ)</td><td>ಬಂದಿದ್ದಲ್ಲಿ, ಈ ಸಂಬಂಧ ಸರ್ಕಾರದಿಂದ ಯಾವ ಕ್ರಮವಹಿಸಲಾಗಿದೆ;</td><td rowspan="3">ಶಾಲಾ ಶಿಕ್ಷಣ ಇಲಾಖೆಯಿಂದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಯನ್ನು ಪ್ರಾರಂಭಿಸುವ ಕುರಿತು ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ ಇವರು ಸಲ್ಲಿಸಿರುವ ಪ್ರಸ್ತಾವನೆಯಲ್ಲಿ ಕೆಲವು ಹುದ್ದೆಗಳನ್ನು ಮರುವಿನ್ಯಾಸಗೊಳಿಸುವುದರ ಜೊತೆಗೆ ಸುಮಾರು 1200ಕ್ಕೂ ಹೆಚ್ಚು ಹುದ್ದೆಗಳನ್ನು ಹೊಸದಾಗಿ ಸೃಜಿಸಲು ಹಾಗೂ ಸ್ವಂತ ಕಟ್ಟಡ ಲಭ್ಯವಿಲ್ಲದೇ ಇರುವ ಸ್ಥಳಗಳಲ್ಲಿ ಬಾಡಿಗೆ ಕಟ್ಟಡಗಳನ್ನು ಪಡೆಯಲು, ಹೊಸ ಕಚೇರಿಗಳಲ್ಲಿ ಅಧಿಕಾರಿ / ಸಿಬ್ಬಂದಿಗಳ ವೇತನ ಭರಿಸಲು, ಅಗತ್ಯ ಮೂಲಭೂತ ಸೌಕರ್ಯ ಒದಗಿಸಲು ಹಾಗೂ ಕಚೇರಿ ನಿರ್ವಹಣೆಗಾಗಿ ಸುಮಾರು ರೂ.1069.24 ಲಕ್ಷಗಳು ಅಗತ್ಯವಿರುವುದಾಗಿ ಪ್ರಸ್ತಾಪಿಸಲಾಗಿರುತ್ತದೆ. ಅದರಂತೆ, ಈ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಯ ಸಹಮತಿಗಾಗಿ ಸಲ್ಲಿಸಲಾಗಿತ್ತು.<br><br>ಕಂದಾಯ ತಾಲ್ಲೂಕುಗಳಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಯನ್ನು ಪ್ರಾರಂಭಿಸುವ ಪ್ರಸ್ತಾವನೆಯನ್ನು 2 ವರ್ಷಗಳ ಕಾಲ ಮುಂದೂಡುವಂತೆ ಆರ್ಥಿಕ ಇಲಾಖೆಯು ದಿನಾಂಕ: 27.05.2025 ರಂದು ಅಭಿಪ್ರಾಯ ನೀಡಿ ಪ್ರಸ್ತಾವನೆಯನ್ನು ಹಿಂದಿರುಗಿಸಿರುತ್ತದೆ.<br><br>ಕಂದಾಯ ತಾಲ್ಲೂಕುಗಳಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಕಛೇರಿಗಳ ಪ್ರಾರಂಭಿಸುವ ಪ್ರಸ್ತಾವನೆಗಳು ಸ್ವೀಕೃತವಾಗುತ್ತಿರುವ ಹಿನ್ನೆಲೆಯಲ್ಲಿ, ಮತ್ತೊಮ್ಮೆ</td></tr>
<tr><td>ಇ)</td><td>ಅತೀ ಹೆಚ್ಚು ಶಿಕ್ಷಣ ಸಂಸ್ಥೆಗಳನ್ನು ಹೊಂದಿರುವ ಸಿಂಧನೂರು ತಾಲ್ಲೂಕಿನಲ್ಲಿ ಈವರೆಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡದಿರಲು ಇರುವ ಪ್ರಮುಖ ಕಾರಣಗಳೇನು;</td></tr>
<tr><td>ಈ)</td><td>ಯಾವ ಕಾಲಮಿತಿಯೊಳಗೆ ಸಿಂಧನೂರು ತಾಲ್ಲೂಕಿನಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಗೆ ಸ್ವಂತ ಕಟ್ಟಡವನ್ನು ನಿರ್ಮಾಣ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?</td></tr>
</table>

| | | |
|---|---|---|
| | | ಆರ್ಥಿಕ ಇಲಾಖೆಯ ಸಹಮತಿಯನ್ನು ಕೋರಲಾಗಿತ್ತು.<br><br>ಕಂದಾಯ ತಾಲ್ಲೂಕುಗಳಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಕಛೇರಿಗಳ ಪ್ರಾರಂಭಿಸುವ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯು ದಿನಾಂಕ: 01.09.2025 ರಂದು ಕೆಳಕಂಡಂತೆ ಅಭಿಪ್ರಾಯ ನೀಡಿರುತ್ತದೆ:<br><br>"ತಾಲ್ಲೂಕುಗಳಲ್ಲಿ ಎಲ್ಲಾ ಇಲಾಖೆಗಳ ಕಚೇರಿಗಳನ್ನು ತೆರೆಯುವ ಅಗತ್ಯವಿಲ್ಲ ಎಂಬುದು ಆರ್ಥಿಕ ಇಲಾಖೆಯ ಸ್ಥಿರ ನಿಲುವಾಗಿರುವುದರಿಂದ, ಈ ಪ್ರಸ್ತಾವನೆಯನ್ನು ಮುಂದೂಡುವಂತೆ ಮತ್ತೊಮ್ಮೆ ತಿಳಿಸಿದೆ.<br><br>ಮುಂದುವರೆದು, ಹೆಚ್ಚಿನ ಇಲಾಖೆಗಳ ಸೇವೆಗಳು ಈಗ ಗಣಕೀಕೃತಗೊಳ್ಳುತ್ತಿರುವುದರಿಂದ, ಎಲ್ಲಾ ತಾಲ್ಲೂಕುಗಳಲ್ಲಿ ಭೌತಿಕ ಕಚೇರಿಗಳನ್ನು ಹೊಂದುವ ಅಗತ್ಯತೆಯ ಬಗ್ಗೆ ಮರುಪರಿಶೀಲಿಸುವಂತೆ ಸಹ ಆಡಳಿತ ಇಲಾಖೆಗೆ ತಿಳಿಸಿದೆ."<br><br>ಆರ್ಥಿಕ ಇಲಾಖೆಯು ನೀಡಿರುವ ಅಭಿಪ್ರಾಯದನ್ವಯ ಹೊಸದಾಗಿ ರಚನೆಯಾಗಿರುವ ತಾಲ್ಲೂಕುಗಳಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ತೆರೆಯುವ ಅಗತ್ಯತೆ ಕುರಿತು ಮರು ಪರಿಶೀಲಿಸುವಂತೆ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು; ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕಲಬುರಗಿ / ಧಾರವಾಡ ಇವರುಗಳಿಗೆ ಸರ್ಕಾರದ ದಿನಾಂಕ: 28.10.2025ರ ಪತ್ರದ ಮೂಲಕ ತಿಳಿಸಲಾಗಿದೆ.<br><br>ಆರ್ಥಿಕ ಇಲಾಖೆಯ ದಿನಾಂಕ: 01.09.2025ರ ಅಭಿಪ್ರಾಯದ ಹಿನ್ನೆಲೆಯಲಿ, ಇಲಾಖೆಗಳ ಸೇವೆಗಳು ಗಣಕೀಕೃತಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ತಾಲ್ಲೂಕುಗಳಲ್ಲಿ ಭೌತಿಕ ಕಛೇರಿಗಳನ್ನು ಹೊಂದುವ ಅಗತ್ಯತೆ ಬಗ್ಗೆ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ ಇವರಿಂದ ವರದಿಯನ್ನು ನಿರೀಕ್ಷಿಸಲಾಗಿದೆ.<br><br>ಆಯುಕ್ತರಿಂದ ವರದಿ ಸ್ವೀಕೃತವಾದ ನಂತರ ಆರ್ಥಿಕ ಇಲಾಖೆಯ ಸಹಮತಿ ಕೋರಿ ಮತ್ತೊಮ್ಮೆ ಕಡತವನ್ನು ಆರ್ಥಿಕ ಇಲಾಖೆಗೆ ಸಲ್ಲಿಸಲಾಗುವುದು. |

ಇಪಿ 170 ಡಿಎಆರ್ 2026

**(ಎಸ್. ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.